# ವಿವಿಧ ಕಾಮಗಾರಿಗಳಿಗೆ ಶಾಸಕ ರವೀಂದ್ರ ಶ್ರೀಕಂಠಯ್ಯ ಗುದ್ದಲಿ ಪೂಜೆ



**ಶ್ರೀರಂಗಪಟ್ಟಣ:** ತಾಲೂಕಿನ ಕೆಆರ್ ಎಸ್ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಸುಮಾರು 8 ಕೋಟಿ 83 ಲಕ್ಷ ರು. ವೆಚ್ಚದ ಗುದ್ದಲಿ ಪೂಜೆಯನ್ನ ಶಾಸಕ ರವೀಂದ್ರ ಶ್ರೀಕಂಠಯ್ಯ ನೆರವೇರಿಸಿದರು.

ಕೆಆರ್‌ಎಸ್, ಹುಲಿಕೆರೆ, ಮಜ್ಜಿಗೆಪುರ, ಬೀಚನಕುಪ್ಪೆ, ಹೊಂಗಳ್ಳಿ ಹಾಗೂ ಮೊಗರಹಳ್ಳಿ ಗ್ರಾಮಗಳಲ್ಲಿ ರಸ್ತೆ, ಕುಡಿಯುವ ನೀರಿನ ಟ್ಯಾಂಕ್, ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರು ಭೂಮಿ ಪೂಜೆ ನರೆವೇರಿಸಿದರು.

ನಂತರ ಶಾಸಕ ರವೀಂದ್ರ ಮಾತನಾಡಿ, ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಿದರು. ಕ್ಷೇತ್ರದ ಪ್ರತಿ ಗ್ರಾಮಗಳಲ್ಲೂ ಆದ್ಯತೆ ಮೇರೆಗೆ ಅಭಿವೃದ್ಧಿ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಹಂತ ಹಂತವಾಗಿ ಪ್ರತಿ ಗ್ರಾಮಗಳ ಅಭಿವೃದ್ಧಿಗೆ ಮುಂದಾಗುವುದಾಗಿ ತಿಳಿಸಿದರು.

ಇದೇ ವೇಳೆ ಕೆಆರ್‌ಎಸ್ ಮಾದರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಕಾವೇರಿ ಸ್ನೇಹ ಬಳಗದಿಂದ ಹಮ್ಮಿಕೊಳ್ಳಲಾಗಿದ್ದ ಗಿಡ ನೆಡುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪರಿಸರ ಕಾಪಾಡುಕೊಳ್ಳುವಂತೆ ಹಿರಿಯ ವಿದ್ಯಾರ್ಥಿಗಳು, ಶಾಲಾ ಶಿಕ್ಷಕರು ಹಾಗೂ ಸಾರ್ವಜನಿಕರಿಗೆ ಕಿವಿಮಾತು ಹೇಳಿದರು. ತಹಸೀಲ್ದಾರ್ ಎಂ.ವಿ.ರೂಪ, ತಾಪಂ ಇಒ ಭೈರಪ್ಪ, ಜಿಪಂ ಮಾಜಿ ಸದಸ್ಯೆ ಸವಿತಾ ಲೋಕೇಶ್, ಕೆಆರ್ ಎಸ್ ಗ್ರಾಪಂ ಅಧ್ಯಕ್ಷ ನಾಗೇಂದ್ರ ಕುಮಾರ್, ಹುಲಿಕೆರೆ ಗ್ರಾಪಂ ಅಧ್ಯಕ್ಷೆ ಸುಶೀಲ, ಎಇಇ ಅಬು, ಗುತ್ತಿಗೆದಾರರಾದ ಪ್ರಜ್ವಲ್, ರಾಮಕೃಷ್ಣೇಗೌಡ ಸೇರಿಂದ ಇತರರಿದ್ದರು.

Scanned with CamScanner